ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	::	591
ಸದಸ್ಯರ ಹೆಸರು	::	ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	::	11.12.2020
ಉತ್ತರಿಸುವ ಸಚಿವರು	::	ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
(ಅ)	ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಆಡಳಿತ ನಿರ್ವಹಣಾ ಮಂಡಳಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡುತ್ತಿದ್ದರೂ ಸಹ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಈ ಅವಕಾಶ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಸದರಿ ವಿಷಯವು ಸರ್ಕಾರದ ಗಮನಕ್ಕೆ ಬಂದಿರುತ್ತದೆ..
(ಆ)	ಬಂದಿದ್ದಲ್ಲಿ, ವಿಶ್ವವಿದ್ಯಾಲಯದ ಕಾಯ್ದೆಗೆ ತಿದ್ದುಪಡಿ ತರುವ ಬಗ್ಗೆ ಸರ್ಕಾರದ ನಿಲುವೇನು;	ಈಗಾಗಲೇ ಬೇರೆ ರಾಜ್ಯಗಳಲ್ಲಿನ ವಿವಿಧ ಪಶುವೈದ್ಯಕೀಯ ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳಿಗೆ ಈ ಸಂಬಂಧ ಮಾಹಿತಿ ಕೋರಲಾಗಿದ್ದು, ಮಾಹಿತಿ ಬಂದ ನಂತರ ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.
(ಇ)	ವಿಶ್ವವಿದ್ಯಾಲಯದ ಕಾಯ್ದೆಗೆ ಯಾವ ಕಾಲಮಿತಿಯೊಳಗೆ ತಿದ್ದುಪಡಿ ತಂದು ಆಡಳಿತ ನಿರ್ವಹಣಾ ಮಂಡಳಿಯಲ್ಲಿ ಮಾನ್ಯ ಶಾಸಕರುಗಳಿಗೆ ಅವಕಾಶ ಕಲ್ಪಿಸಲಾಗುವುದು?	ಆದ್ಯತೆ ಮೇರೆಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಪಸಂಮೀ ಇ-268 ಪಅಸೇ 2020

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು